ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ಪಡಿತರ ಅಕ್ಕಿ ಮತ್ತು ಇತರೆ ಪಡಿತರ ಸಾಮಗ್ರಿಗಳನ್ನು ಅಕ್ರಮವಾಗಿ ದಾಸ್ತಾನು ಮಾಡಿರುವ ಕುರಿತು

ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :-

964(1089) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ನಾನಾ ಜಿಲ್ಲೆಗಳಲ್ಲಿ ಪಡಿತರ ಅಕ್ಕಿ ಮತ್ತು ಇತರೆ ಸಾಮಗ್ರಿಗಳನ್ನು ಅಕ್ರಮವಾಗಿ ದಾಸ್ತಾನು ಮಾಡಿರುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)

(ಆ) ಈ ಅಕ್ರಮ ದಾಸ್ತಾನು ಸಂಗ್ರಹ ಮಾಡಿರುವವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗಿದೆಯೇ; ದಾಖಲಿಸಿದ್ದಲ್ಲಿ, ಜಿಲ್ಲಾವಾರು ವಿವರ ನೀಡುವುದು ;

(ಇ) ಈ ಅಕ್ರಮ ದಾಸ್ತಾನು ಸಂಗ್ರಹ ಮಾಡಿದವರಿಗೆ ಸಹಕರಿಸಿರುವ ವ್ಯಕ್ತಿ ಅಥವಾ ಸಂಸ್ಥೆಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ವಿವರ ನೀಡುವುದು)

(ಈ) ಭವಿಷ್ಯದಲ್ಲಿ ಈ ರೀತಿಯಾದ ಅಕ್ರಮ ದಾಸ್ತಾನು ಸಂಗ್ರಹವನ್ನು ತಪ್ಪಿಸಲು ಸರ್ಕಾರ ವೈಜ್ಞಾನಿಕ ರೀತಿಯಲ್ಲಿ ಕ್ರಮಗಳನ್ನು ಕೈಗೊಳ್ಳಲು ಚಿಂತನೆ ನಡೆಸಿದೆಯೇ? (ವಿವರ ನೀಡುವುದು)